Azadi Ka Amrit Mahotsav

ಕರ್ನಾಟಕ ಸರ್ಕಾರ

ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001

ಸಂಖ್ಯೆ: ಶಿ.ವ.ಕೋಶ.ಸಾ.ವ/01/2022-23 ದಿನಾಂಕ: 21/06/2023

## : ಅಧಿಕೃತ ಜ್ಞಾಪನ :

**ವಿಷಯ:** 2022-23ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಒಳಗೊಂಡಂತೆ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಪ್ರಸ್ತುತ ಹೆಚ್ಚುವರಿಯಾಗಿ ಕೌನ್ಸಿಲಿಂಗ್‌ನಲ್ಲಿ ಸ್ಥಳ ನಿಯುಕ್ತಿಗೊಂಡ ಶಿಕ್ಷಕರುಗಳಿಗೆ ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಮತ್ತು ಆಧ್ಯತೆಗೆ ಕ್ಲೇಮ್ ಮಾಡಲು ಅವಕಾಶ ಕಲ್ಪಿಸಿದ ಕುರಿತು:

**ಉಲ್ಲೇಖ:**
1. ಪರಿಷ್ಕೃತ ವರ್ಗಾವಣಾ ವೇಳಾಪಟ್ಟಿ ಸಂಖ್ಯೆ:ಶಿ.ವ.ಕೋಶ.ಸಾ.ವ/01/2022-23 ದಿನಾಂಕ: 02/06/2023.
2. ಈ ಕಛೇರಿ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಶಿ.ವ.ಕೋಶ.ಸಾ.ವ/01/2022-23 ದಿನಾಂಕ: 08/06/2023.
3. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಬೆಂಗಳೂರು ಇವರ ಮನವಿ ಪತ್ರ ದಿನಾಂಕ: 20/06/2023

*********

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ಅಧಿನಿಯಮ-2020 [2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 04] ಹಾಗೂ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ನಿಯಮಗಳು-2020ರ ನಿಯಮಗಳಂತೆ, ಹಾಗೂ ವರ್ಗಾವಣಾ ತಿದ್ದುಪಡಿ ಕಾಯ್ದೆ ಮತ್ತು ನಿಯಮ-2022ರ ಪ್ರಕಾರ ಉಲ್ಲೇಖ-1ರಲ್ಲಿ ಈಗಾಗಲೇ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು. ಅದರಂತೆ ದಿನಾಂಕ: 20/06/2023 ರಿಂದ 23/06/2023 ರವರೆಗೆ ಪ್ರಾಥಮಿಕ ಶಾಲಾ ಮತ್ತು ಪ್ರೌಢಶಾಲಾ ಶಿಕ್ಷಕರ ಹೆಚ್ಚುವರಿ ವರ್ಗಾವಣಾ ಕೌನ್ಸಿಲಿಂಗ್‌ನಲ್ಲಿ ಸ್ಥಳ ನಿಯುಕ್ತಿಗೊಂಡ ಶಿಕ್ಷಕರುಗಳಿಗೆ ಮಾತ್ರ ಆನ್‌ಲೈನ್‌ನಲ್ಲಿ ಹೊಸದಾಗಿ ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಉಲ್ಲೇಖ-2ರಂತೆ ಆಧ್ಯತೆ ಕ್ಲೇಮ್ ಮಾಡಲು ದಿನಾಂಕ: 22/06/2023 ರಿಂದ 26/06/2023ರ ವರೆಗೆ ಅವಕಾಶ ಕಲ್ಪಿಸಿದೆ.

ಸದರಿ ಅರ್ಜಿಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಪರಿಶೀಲಿಸಿ ದಿನಾಂಕ: 27/06/2023ರೊಳಗೆ ಅರ್ಜಿಯನ್ನು ಅಂಗೀಕರಿಸಲು/ತಿರಸ್ಕರಿಸಲು ಅಂತಿಮವಾಗಿ ಅವಕಾಶ ಕಲ್ಪಿಸಿದೆ. ತದನಂತರ ಯಾವುದೇ ಬದಲಾವಣೆಗೆ ಅವಕಾಶವಿರುವುದಿಲ್ಲ. ಉಳಿದಂತೆ ಈ ಕಛೇರಿಯಿಂದ ಈ ಹಿಂದೆ ಕಾಲ ಕಾಲಕ್ಕೆ ಹೊರಡಿಸಲಾಗಿರುವ ಸುತ್ತೋಲೆ ಮತ್ತು ವರ್ಗಾವಣಾ ಮಾರ್ಗಸೂಚಿಗಳು ಯಥಾವತ್ತಾಗಿ ಮುಂದುವರೆದಿರುತ್ತದೆ.

(ಡಾ: ವಿಶಾಲ್. ಆರ್) ಭಾ.ಆ.ಸೇ
ಆಯುಕ್ತರು.
ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು

ಇವರಿಗೆ, ಅಗತ್ಯ ಕ್ರಮಕ್ಕಾಗಿ

1) ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ಹಾಗೂ ವರ್ಗಾವಣಾ ಪ್ರಾಧಿಕಾರಿಗಳು ಇವರಿಗೆ
2) ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
3) ನಿರ್ದೇಶಕರು, ಅಪರ ಆಯುಕ್ತರ ಕಛೇರಿ ಗುಲ್ಬರ್ಗಾ/ಧಾರವಾಡ
4) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ಮೈಸೂರು /ಬೆಳಗಾವಿ/ಕಲಬುರಗಿ
5) ಶಾಲಾ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
6) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು [ಆಡಳಿತ] ರವರ ಮೂಲಕ)